ಜೆಎಸ್ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

ಊಟಿರಸ್ತೆ, ಮೈಸೂರು-570 025, ಕರ್ನಾಟಕ

☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ: 29.03.2016

**ಪ್ರಕಟಣೆಗಾಗಿ**

## ದೇಶದ ಅಭಿವೃದ್ಧಿ ಗ್ರಾಮೀಣ ಜನರಿಂದಲೇ ಹೊರತು ನಗರದ ಜನರಿಂದಲ್ಲ

–ಡಾ ಬಿ ಎನ್ ರವೀಶ್

ಮೈಸೂರು ನಗರದ ಬಿ ಎನ್ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ 2016 ರ ಮಾರ್ಚಿ 28 ರಂದು ಜೆಎಸ್‌ಎಸ್ ಮಹಾವಿದ್ಯಾಪೀಠದ ಸಂಸ್ಥಾಪಕರಾದ ಜಗದ್ಗುರು ಡಾ ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಜನ್ಮ ಶತಮಾನೋತ್ಸವ ಮತ್ತು ಕಾಲೇಜಿನ ಸುವರ್ಣ ಮಹೋತ್ಸವದ ಅಂಗವಾಗಿ ವಿಶೇಷ ಉಪನ್ಯಾಸ ಸರಣಿಯ 8 ಉಪನ್ಯಾಸವಾಗಿ ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆಯ ನಿರ್ದೇಶಕರಾದ ಡಾ. ಬಿ ಎನ್ ರವೀಶ್‌ರವರು "ಶಿಕ್ಷಣದಲ್ಲಿ ಮೌಲ್ಯ" ಎಂಬ ವಿಷಯದ ಬಗ್ಗೆ ಉಪನ್ಯಾಸ ನೀಡಿದರು. ಗ್ರಾಮೀಣ ಜನತೆಯಿಂದಲೇ ದೇಶದ ಉದ್ಧಾರ ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿದ ಅವರು ನಗರ–ಗ್ರಾಮೀಣ ಬದುಕಿನ ವಿಭಿನ್ನತೆ, ವಿದೇಶಿ ವ್ಯಾಮೋಹ ಮತ್ತು ಮೊಬೈಲ್‌ನ ಮಾರಕತೆಯ ಋಣಾತ್ಮಕ ಪರಿಣಾಮಗಳನ್ನು ಮನದಟ್ಟು ಮಾಡಿದರು. ಸಂಸ್ಕೃತದ ಶ್ಲೋಕಗಳು, ದಿಗ್ಗಜರ ಅಮೂಲ್ಯ ನುಡಿಗಳು ಮತ್ತು ದೃಶ್ಯ ಮಾಧ್ಯಮಗಳೊಂದಿಗೆ ವಿದ್ಯಾರ್ಥಿಗಳಿಗೆ ವಾಸ್ತವತೆ ಮತ್ತು ಜವಾಬ್ದಾರಿಯ ಅರಿವನ್ನು ಮೂಡಿಸಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದಂತಹ ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾದ ಶ್ರೀ ಎಂ ಎಸ್ ಎಸ್ ಕುಮಾರ್‌ರವರು ಯುವಜನತೆಗೆ ಸದೃಢ ಭವಿಷ್ಯ ನಿರ್ಮಾಣದ ಬಗ್ಗೆ ಅರಿವು ಮೂಡಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದಂತಹ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ ಬಿ ವಿ ಸಾಂಬಶಿವಯ್ಯನವರು ಇಂದು ಮನುಷ್ಯನು ಮಾನವೀಯ ಮೌಲ್ಯಗಳಿಲ್ಲದೆ ಜೀವಿಸುತ್ತಿರುವುದು ವಿಷಾದನೀಯ. ಮೌಲ್ಯರಹಿತ ಶಿಕ್ಷಣವೇ ಇದಕ್ಕೆ ಕಾರಣವಾಗಿದೆ. ಶಾಲೆ, ಕುಟುಂಬ ಮತ್ತು ಸಮಾಜ ಈ ಮೂರು ಮುಪ್ಪುರಿಯಾಗಿ ಕರ್ತವ್ಯ ನಿರ್ವಹಿಸಿ ಮೌಲ್ಯಗಳನ್ನು ಉಳಿಸಿ ಬೆಳೆಸಬೇಕು. ಇದರಲ್ಲಿ ಶಿಕ್ಷಕನ ಪಾತ್ರ ಅತ್ಯಂತ ಗುರುತರವಾದುದು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಮಹದೇವಪ್ಪನವರು ಮತ್ತು ಶೈಕ್ಷಣಿಕ ಡೀನ್‌ರವರಾದ ಡಾ. ಕೆ ವಿ ಸುರೇಶ ರವರು ಉಪಸ್ಥಿತರಿದ್ದರು.

ಕಾರ್ಯಕ್ರಮವು ಕುಮಾರಿ ಶ್ವೇತ ಮತ್ತು ತಂಡದವರ ಪ್ರಾರ್ಥನೆಯೊಂದಿಗೆ ಪ್ರಾರಂಭವಾಯಿತು. ಸ್ನಾತಕೋತ್ತರ ಸಮಾಜಕಾರ್ಯವಿಭಾಗದ ಮುಖ್ಯಸ್ಥರಾದ ಡಾ. ಎಂ ಪಿ ಸೋಮಶೇಖರ್‌ರವರು ಸ್ವಾಗತಿಸಿದರು. ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ ಕುಮುದಿನಿ ಅಚ್ಚಿ ವಂದಿಸಿದರು. ಶ್ರೀಮತಿ ಬಿ ಸುಸ್ಮಿತ ನಿರೂಪಿಸಿದರು.

ಪ್ರಾಂಶುಪಾಲರು

(ಪ್ರೊ ಎಂ ಮಹದೇವಪ್ಪ)

ಪ್ರಾಂಶುಪಾಲರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಊಟಿ ರಸ್ತೆ, ಮೈಸೂರು-570 025.

ಗೆ

ಸಂಪಾದಕರು

---------------

---------------

ಮೈಸೂರು